ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಹಾಸನದಲ್ಲಿ ಗ್ರೀನ್‌ಫೀಲ್ಡ್ ದೇಶಿಯ ಪ್ರಯಾಣಿಕ ವಿಮಾನ ನಿಲ್ದಾಣ ಅಭಿವೃದ್ಧಿಗೆ ಸಂಬಂಧಿಸಿದಂತೆ ಅನುದಾನ ಬಿಡಗುಡಗೆ ಮಾಡುವ ಬಗ್ಗೆ.

ಓದಲಾಗಿದೆ:-
1) ಸರ್ಕಾರದ ಆದೇಶ ಸಂಖ್ಯೆ: ಮೂಅಇ 47 ರಾಅವಿ 2018, ದಿನಾಂಕ 25/06/2021
2) ಸರ್ಕಾರದ ಆದೇಶ ಸಂಖ್ಯೆ: ಮೂಅಇ 90 ರಾಅವಿ 2020, ದಿನಾಂಕ: 30/12/2021.
3) ಸರ್ಕಾರದ ಆದೇಶ ಸಂಖ್ಯೆ: ಮೂಅಇ 90 ರಾಅವಿ 2020, ದಿನಾಂಕ: 21/02/2022.
4) ಸರ್ಕಾರದ ಆದೇಶ ಸಂಖ್ಯೆ: ಐಡಿಡಿ 22 ಯುಐಪಿ 2020, ದಿನಾಂಕ: 15.04.2021.
5) ಆರ್ಥಿಕ ಇಲಾಖೆ ಆದೇಶ ಸಂಖ್ಯೆ; ಎಫ್‌ಡಿ 605 ಬಿಆರ್‌ಎಸ್ 2021 , ದಿನಾಂಕ: 08/03/2022.

******

**ಪ್ರಸ್ತಾವನೆ**:-

ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ದಿನಾಂಕ 25/06/2021 ರ ಆದೇಶದಲ್ಲಿ ಹಾಸನ ವಿಮಾನ ನಿಲ್ದಾಣದ ಅಭಿವೃದ್ಧಿ ಸಂಬಂಧಿಸಿದಂತೆ ಕೈಗೊಳ್ಳಬೇಕಾಗಿರುವ ಕ್ರಮದ ವಿವರಗಳ ಸಂಬಂಧ ಸೂಕ್ತ ಆದೇಶವನ್ನು ಹೊರಡಿಸಲಾಗಿರುತ್ತದೆ.

2. ಮೇಲೆ ಓದಲಾದ ಕ್ರಮ ಸಂಖ್ಯೆ (2)ರ ಆದೇಶದಲ್ಲಿ ಹಾಸನ ವಿಮಾನ ನಿಲ್ದಾಣದ ಎರಡನೇ ಹಂತದ ಅಭಿವೃದ್ಧಿ ರನ್‌ವೇ ವಿಸ್ತರಣೆಗಾಗಿ (2200 ರಿಂದ 3300 ಮೀಟರ್ ವರೆಗೆ) ಅವಶ್ಯವಿರುವ 24 ಎಕರೆ 23 ಗುಂಟೆ ಜಮೀನಿನಲ್ಲಿ ಹೆಚ್ಚುವರಿ ಭೂಮಿಯನ್ನು ಭೂಸ್ವಾಧೀನಪಡಿಸಿಕೊಳ್ಳಲು ರೂ.13.20 ಕೋಟಿಗಳ ಅನುದಾನವನ್ನು ಬಿಡುಗಡೆ ಮಾಡಲಾಗಿರುತ್ತದೆ.

3. ಮೇಲೆ ಓದಲಾದ ಕ್ರಮ ಸಂಖ್ಯೆ (3)ರ ಹಾಸನ ವಿಮಾನ ನಿಲ್ದಾಣದ ಪ್ಯಾಕೇಜ್ -1 ಕಾಮಗಾರಿಗಳಿಗೆ ಹಾಗೂ ವಿದ್ಯುತ್ ಪ್ರಸರಣ ಅಡೆತಡೆಯನ್ನು ತೆಡೆಯಲು ರೂ.39.76 ಕೋಟಿಗಳ ಅನುದಾನವನ್ನು ಬಿಡುಗಡೆ ಮಾಡಲಾಗಿರುತ್ತದೆ.

4. ಮೇಲೆ ಓದಲಾದ ಕ್ರಮ ಸಂಖ್ಯೆ (4)ರ ಆದೇಶದಲ್ಲಿ 2021-22ನೇ ಆರ್ಥಿಕ ಸಾಲಿಗೆ ಮೂಲಸೌಲಭ್ಯ ಅಭಿವೃದ್ಧಿ, ಬಂದರು ಮತ್ತು ಒಳನಾಡು ಜಲಸಾರಿಗೆ ಇಲಾಖೆಗೆ ಮುಂದುವರೆದ ಯೋಜನೆಗಳ ಅನುಷ್ಠಾನಕ್ಕೆ ಸಂಬಂಧಿಸಿದಂತೆ ಅನುಮೋದನೆಯನ್ನು ನೀಡಿ ಆದೇಶಿಸಲಾಗಿದೆ.

ಇದರಲ್ಲಿ ಲೆಕ್ಕ ಶೀರ್ಷಿಕೆ 5465-01-190-1-05-132- ಸಣ್ಣ ವಿಮಾನ ನಿಲ್ದಾಣಗಳ ಅಭಿವೃದ್ಧಿ – ಬಂಡವಾಳ ವೆಚ್ಚಗಳು ಅಡಿ 25000.00 ಲಕ್ಷಗಳ ಅನುದಾನವನ್ನು ಒದಗಿಸಲಾಗಿದೆ.

5. ಮೇಲೆ ಓದಲಾದ ಕ್ರಮ ಸಂಖ್ಯೆ (5)ರ ಆರ್ಥಿಕ ಇಲಾಖೆಯ ಆದೇಶದಲ್ಲಿ ಲೆಕ್ಕ ಶೀರ್ಷಿಕೆ 5465-01-190-1-05-132- ಸಣ್ಣ ವಿಮಾನ ನಿಲ್ದಾಣಗಳ ಅಭಿವೃದ್ಧಿ – ಬಂಡವಾಳ ವೆಚ್ಚಗಳಿಗೆ ಪೂರಕ ಅಂದಾಜಿನಲ್ಲಿ ರೂ.15000.00 ಲಕ್ಷಗಳ ಹೆಚ್ಚುವರಿ ಅನುದಾನವನ್ನು ಒದಗಿಸಲಾಗಿರುತ್ತದೆ. ಹಾಸನ ವಿಮಾನ ನಿಲ್ದಾಣದ ಪ್ಯಾಕೇಜ್ 1 ಕಾಮಗಾರಿಗಳು ತ್ವರಿತಗತಿಯಲ್ಲಿ ಸಾಗುತ್ತಿದ್ದು, ಹಾಸನ ವಿಮಾನ ನಿಲ್ದಾಣದ ಅಭಿವೃದ್ಧಿಗೆ ಸಂಬಂಧಿಸಿದಂತೆ ಅನುದಾನವನ್ನು ಬಿಡುಗಡಗೊಳಿಸಲು ತೀರ್ಮಾನಿಸಿ ಈ ಕಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ:ಮೂಅಇ 90 ರಾಅವಿ 2020**

**ಬೆಂಗಳೂರು, ದಿನಾಂಕ: 21ನೇ ಮಾರ್ಚ್ 2022.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಹಾಸನ ವಿಮಾಣ ನಿಲ್ದಾಣದ ಪ್ಯಾಕೇಜ್-1 ಕಾಮಗಾರಿಗಳಿಗೆ ರೂ.20.00 ಕೋಟಿಗಳ (ಇಪ್ಪತ್ತು ಕೋಟಿ ರೂಪಾಯಿಗಳು ಮಾತ್ರ ) ಅನುದಾವನ್ನು ವ್ಯವಸ್ಥಾಪಕ ನಿರ್ದೇಶಕರು ಕೆ.ಎಸ್.ಐ.ಐ.ಡಿ.ಸಿ ನಿಯಮಿತ ಇವರಿಗೆ ಬಿಡುಗಡೆ ಮಾಡಲು ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಸರ್ಕಾರದ ಅನುಮೋದನೆಯನ್ನು ನೀಡಲಾಗಿದೆ.

**2. ಷರತ್ತುಗಳು**

- ಈಗ ಬಿಡುಗಡೆ ಆಗಿರುವ ಅನುದಾನವನ್ನು ಯಾವ ಉದ್ದೇಶಕ್ಕೆ ಬಿಡುಗಡೆ ಮಾಡಲಾಗಿದೆಯೋ ಅದೇ ಉದ್ದೇಶಕ್ಕೆ ಮಾತ್ರ ಬಳಕೆ ಮಾಡತಕ್ಕದ್ದು, ಹಾಗೂ ಇದೇ ಉದ್ದೇಶಕ್ಕೆ ಈಗಾಗಲೇ ವೆಚ್ಚ ಮಾಡಿದ್ದಲ್ಲಿ ಈಗ ಬಿಡುಗಡೆ ಮಾಡಿರುವ ಅನುದಾನವನ್ನು ಬಳಕೆ ಮಾಡುವಂತಿಲ್ಲ.
- ಬಿಡುಗಡೆ ಮಾಡಿರುವ ಅನುದಾನವನ್ನು ಹಾಸನ ವಿಮಾನ ನಿಲ್ದಾಣದ ಪ್ಯಾಕೇಜ್ – 1 ಕಾಮಗಾರಿಗಳಿಗೆ ಮಾತ್ರ ಬಳಕೆ ಮಾಡತಕ್ಕದ್ದು.
- ಅನುದಾನ ಬಳಕೆ ಬಗ್ಗೆ ನಿಗಧಿತ ನಮೂನೆಯಲ್ಲಿ ಹಣ ಬಳಕೆ ಪ್ರಮಾಣ ಪತ್ರ ಸಲ್ಲಿಸತಕ್ಕದ್ದು.

3. ಈ ಯೋಜನೆಗಾಗಿ 2021-22ನೇ ಸಾಲಿನ ಲೆಕ್ಕ ಶಿರ್ಷಿಕೆ 5465-01-190-1-05-132 – ಸಣ್ಣ ವಿಮಾನ ನಿಲ್ದಾಣಗಳ ಅಭಿವೃದ್ಧಿ - ಬಂಡವಾಳ ವೆಚ್ಚಗಳು ಅಡಿ ಒದಗಿಸಲಾಗಿರುವ ಅನುದಾನದಿಂದ ಭರಿಸತಕ್ಕದ್ದು.

4. ಈ ಮೊತ್ತವನ್ನು ವ್ಯವಸ್ಥಾಪಕ ನಿರ್ದೇಶಕರು, ಕೆ.ಎಸ್.ಐ.ಐ.ಡಿ.ಸಿ., ಬೆಂಗಳೂರು ಇವರು ಪೇಯೀಸ್ ರಸೀದಿಯ ಮೂಲಕ ಸರ್ಕಾರದ ಅಧೀನ ಕಾರ್ಯದರ್ಶಿ-1 ಮೂಲಸೌಲಭ್ಯ ಅಭಿವೃದ್ಧಿ, ಬಂದರುಗಳು ಮತ್ತು ಒಳನಾಡು ಜಲಸಾರಿಗೆ ಇಲಾಖೆ, ಇವರ ಮೇಲು ರುಜುವಿನೊಂದಿಗೆ ರಾಜ್ಯ ಹುಜೂರು ಖಜಾನೆ, ಬೆಂಗಳೂರು ಇಲ್ಲಿ ಪಡೆಯಲು ಅನುಮತಿಸಿದೆ.

5. ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂಖ್ಯೆ: ಎಫ್‌ಡಿ/605/ ಬಿಎಸ್‌ಆರ್ / 2021, ದಿನಾಂಕ:08/03/2022ರ ಮೂಲಕ ಒದಗಿಸಿರುವ ಹೆಚ್ಚುವರಿ ಅನುದಾನದ ಹಾಗೂ ಪತ್ರ ಸಂಖ್ಯೆ: ಆಇ 01 ಟಿಎಫ್‌ಪಿ 2021, ದಿನಾಂಕ: 31/12/2021ರಲ್ಲಿ ಇಲಾಖಾ ಅಪರ ಮುಖ್ಯ ಕಾರ್ಯದರ್ಶಿಗಳು / ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಿರುವ ಆರ್ಥಿಕ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

**(ಎಸ್.ಎನ್. ಕಲಾವತಿ)**
ಸರ್ಕಾರದ ಅಧೀನ ಕಾರ್ಯದರ್ಶಿ-1,
ಮೂಲಸೌಲಭ್ಯ ಅಭಿವೃದ್ಧಿ, ಬಂದರುಗಳು
ಮತ್ತು ಒಳನಾಡು ಜಲಸಾರಿಗೆ ಇಲಾಖೆ,

**ಗೆ:**

1. ಮಹಾಲೇಖಪಾಲರು,(ಜಿ&ಎಸ್,ಎಸ್,ಎ) (ಇ& ಆರ್,ಎಸ್,ಎ), ಕರ್ನಾಟಕ, ಹೊಸ ಕಟ್ಟಡ, "ಆಡಿಟ್ ಭವನ ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು -560 001.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ, ವಿಕಾಸ ಸೌಧ, ಬೆಂಗಳೂರು.
3. ಜಿಲ್ಲಾಧಿಕಾರಿಗಳು, ಶಿವಮೊಗ್ಗ ಜಿಲ್ಲೆ, ಶಿವಮೊಗ್ಗ.
4. ಆಯುಕ್ತರು, ಟಿ.ಎನ್.ಎಂ.ಸಿ, ಖನಿಜಭವನ, ಬೆಂಗಳೂರು.
5. ಮುಖ್ಯ ಇಂಜಿನಿಯರ್, ಲೋಕೋಪಯೋಗಿ ಇಲಾಖೆ, ಶಿವಮೊಗ್ಗ.
6. ವ್ಯವಸ್ಥಾಪಕ ನಿರ್ದೇಶಕರು, ಕೆ.ಎಸ್.ಐ.ಐ.ಡಿ.ಸಿ, ಖನಿಜ ಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು.
7. ನಿರ್ದೇಶಕರು, ಖಜಾನೆ ಇಲಾಖೆ, ವಿ.ವಿ.ಗೋಪುರ, ಬೆಂಗಳೂರು
8. ಯೋಜನಾ ನಿರ್ದೇಶಕರು, ಖಜಾನೆ-2, ಗಾಂಧಿನಗರ, ಬೆಂಗಳೂರು.
9. ಹಿರಿಯ ನಿರ್ದೇಶಕರು, ಯೋಜನೆ ಹಾಗೂ ಸಂಪನ್ಮೂಲ ವಿಭಾಗ, ಯೋಜನೆ ಕಾರ್ಯಕ್ರಮ, ಸಂಯೋಜನೆ ಹಾಗೂ ಸಾಂಖ್ಯಿಕ ಇಲಾಖೆ, ಬೆಂಗಳೂರು.
10. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-1,) ವಿಧಾನ ಸೌಧ, ಬೆಂಗಳೂರು.

**ಪ್ರತಿ:**

1. ಮಾನ್ಯ ವಸತಿ ಮತ್ತು ಮೂಲಸೌಲಭ್ಯ ಅಭಿವೃದ್ಧಿ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು

2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಮೂಲಸೌಲಭ್ಯ ಅಭಿವೃದ್ಧಿ, ಬಂದರುಗಳು ಮತ್ತು ಒಳನಾಡು ಜಲಸಾರಿಗೆ ಇಲಾಖೆ, ವಿಕಾಸ ಸೌಧ, ಬೆಂಗಳೂರು.
3. ಸರ್ಕಾರದ ಜಂಟಿ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಮೂಲಸೌಲಭ್ಯ ಅಭಿವೃದ್ಧಿ, ಬಂದರುಗಳು ಮತ್ತು ಒಳನಾಡು ಜಲಸಾರಿಗೆ ಇಲಾಖೆ, ವಿಕಾಸ ಸೌಧ, ಬೆಂಗಳೂರು.
4. ನಿರ್ದೇಶಕರು, ಪಿಪಿಪಿ ಕೋಶ, ಮೂಲಸೌಲಭ್ಯ ಅಭಿವೃದ್ಧಿ, ಬಂದರುಗಳು ಮತ್ತು ಒಳನಾಡು ಜಲಸಾರಿಗೆ ಇಲಾಖೆಯ, ವೆಬ್ ಸೈಟ್ ನಲ್ಲಿ ಪ್ರಕಟಿಸಲು.
5. ಶಾಖಾ ರಕ್ಷಾ ಕಡತ /ಹೆಚ್ಚುವರಿ ಪ್ರತಿಗಳು.